ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1628
ಮಾನ್ಯ ಸದಸ್ಯರ ಹೆಸರು	:	ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ವಿಷಯ	:	ಶ್ರೀ ಮಲೈಮಹದೇಶ್ವರ ಬೆಟ್ಟದಲ್ಲಿನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ.
ಉತ್ತರಿಸುವ ದಿನಾಂಕ	:	20.03.2020
ಉತ್ತರಿಸುವ ಸಚಿವರು	:	ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಪ್ರವಾಸೋದ್ಯಮ ಇಲಾಖೆ ವತಿಯಿಂದ ಚಾಮರಾಜನಗರ ಜಿಲ್ಲೆಯ ಶ್ರೀ ಮಲೈಮಹದೇಶ್ವರ ಬೆಟ್ಟದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳಾವುವು; (ವಿವರ ನೀಡುವುದು);	ಚಾಮರಾಜನಗರ ಜಿಲ್ಲೆಯ, ಮಲೈಮಹದೇಶ್ವರ ದೇವಾಲಯದ ಮುಖ್ಯ ದ್ವಾರದಿಂದ ಪ್ರವಾಸಿ ಮಂದಿರಕ್ಕೆ ಸಿ.ಸಿ. ರಸ್ತೆ ನಿರ್ಮಾಣ ಕಾಮಗಾರಿಯನ್ನು 2019-20ನೇ ಸಾಲಿನಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.
ಆ)	ಸದರಿ ಯೋಜನೆಯ ಅಂದಾಜು ಮೊತ್ತವೆಷ್ಟು; (ವಿವರ ನೀಡುವುದು)	ರೂ.200.00 ಲಕ್ಷಗಳು.
ಇ)	ಈ ಕಾಮಗಾರಿಗಳು ಯಾವ ಹಂತದಲ್ಲಿವೆ;	ದಿನಾಂಕ: 10.03.2020ರಂದು ಅಂದಾಜುಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ ಸಂಸ್ಥೆಯಿಂದ ಕಾಮಗಾರಿ ಪ್ರಾರಂಭಿಸಬೇಕಾಗಿರುತ್ತದೆ.
ಈ)	ಕಾಮಗಾರಿಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು?	ನಿಯಮಾನುಸಾರ ಕಾಮಗಾರಿ ಪ್ರಾರಂಭವಾದ 09 ತಿಂಗಳಲ್ಲಿ (ಮಳೆಗಾಲ ಹೊರತುಪಡಿಸಿ) ಪೂರ್ಣಗೊಳಿಸಲಾಗುವುದು.

ಕಡತ ಸಂಖ್ಯೆ: ಟಿಒಆರ್ 120 ಟಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.